## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕೆ.ಜಿ.ಎಫ್. ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆಗೆ (ಪರಿಷ್ಕೃತ-I) ಸರ್ಕಾರದ ಅಂತಿಮ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ: ನಅಇ 217 ಬೆಂರೂಪ್ರಾ 2015, ದಿನಾಂಕ:07.01.2016
2. ಆಯುಕ್ತರು, ಕೆ.ಜಿ.ಎಫ್ ನಗರಾಭಿವೃದ್ಧಿ ಪ್ರಾಧಿಕಾರ ಇವರ ಪತ್ರ ಸಂಖ್ಯೆ:ಕೆ.ಜಿ.ಎಫ್/ನಅಪ್ರಾ/ಮಾಯೋ(ಪ-1)2031/ಅಅ/01/2016-17, ದಿನಾಂಕ:12.09.2016 ಮತ್ತು 24.01.2017.
3. ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರು ಇವರ ಪ್ರಸ್ತಾವನೆಗಳ ಸಂಖ್ಯೆ:DTCP-03-MPF-2016-17, ದಿನಾಂಕ:29.09.2016 ಮತ್ತು 04.10.2017.

8276
7/3/18

*****

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ ಕೆ.ಜಿ.ಎಫ್ ಪಟ್ಟಣ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆಗೆ ತಾತ್ಕಾಲಿಕ ಅನುಮೋದನೆ ನೀಡಲಾಗಿದೆ.

ಮೇಲೆ ಓದಲಾದ (2)ರ ಪತ್ರಗಳಲ್ಲಿ, ಆಯುಕ್ತರು, ಕೆ.ಜಿ.ಎಫ್ ನಗರಾಭಿವೃದ್ಧಿ ಪ್ರಾಧಿಕಾರ ಇವರು ಕೆ.ಜಿ.ಎಫ್ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ತಯಾರಿಸಿರುವ ಮಹಾಯೋಜನೆ ಕುರಿತು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಪ್ರಕರಣ 13(1)ಮತ್ತು(2) ರನ್ವಯ ಕ್ರಮ ಜರುಗಿಸಿ, ಮಹಾಯೋಜನೆಯ ನಕ್ಷೆಗಳನ್ನು ಹಾಗೂ ವರದಿಯನ್ನು ತಯಾರಿಸಿ ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ ಇವರ ಮುಖಾಂತರ ಸರ್ಕಾರದ ಅಂತಿಮ ಅನುಮೋದನೆಗೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (3)ರಲ್ಲಿ, ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಇವರು ಸಲ್ಲಿಸಿರುವ ಪ್ರಸ್ತಾವನೆಗಳಲ್ಲಿ, ಕೆ.ಜಿ.ಎಫ್ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶ ವ್ಯಾಪ್ತಿಯ ಜನಸಂಖ್ಯೆಯು 2011ರ ಜನಗಣತಿಯಂತೆ 2,43,600 ಇದ್ದು ಮುಂದಿನ ಯೋಜನಾ ಅವಧಿ 2031ರ ವೇಳೆಗೆ 3,70,000 ಆಗಬಹುದೆಂದು ಅಂದಾಜಿಸಿ ಮಹಾಯೋಜನೆ (ಪರಿಷ್ಕೃತ-1) ಯನ್ನು ತಯಾರಿಸಲಾಗಿದೆ. ಕೆ.ಜಿ.ಎಫ್ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಒಟ್ಟು 5132.17 ಹೆಕ್ಟೇರ್ ಪ್ರದೇಶವನ್ನು ನಗರೀಕರಣದ ಎಲ್ಲೆಯೆಂದು ಪ್ರಸ್ತಾಪಿಸಿ ಮಹಾಯೋಜನೆಯನ್ನು ರೂಪಿಸಲಾಗಿದೆ.

ಪಟ್ಟಣದ ಯೋಜಿತ ಬೆಳವಣಿಗೆಗಾಗಿ ಒಟ್ಟು 5132.17 ಹೆಕ್ಟೇರ್ ಪ್ರದೇಶದಲ್ಲಿ ವಸತಿಗಾಗಿ 2650.59 ಹೆಕ್ಟೇರ್ (ಶೇ.55.76), ವಾಣಿಜ್ಯಕ್ಕಾಗಿ 252.22 ಹೆಕ್ಟೇರ್ (ಶೇ.5.31), ಕೈಗಾರಿಕೆಗಾಗಿ 448.41 ಹೆಕ್ಟೇರ್ (ಶೇ.9.43), ಸಾರ್ವಜನಿಕ/ಅರೆ ಸಾರ್ವಜನಿಕ ಉಪಯೋಗಕ್ಕೆ 220.92 ಹೆಕ್ಟೇರ್ (ಶೇ.4.65), ಉದ್ಯಾನವನ ಮತ್ತು ಬಯಲು ಜಾಗಕ್ಕಾಗಿ 514.33 ಹೆಕ್ಟೇರ್ (ಶೇ.10.82), ಸಾರ್ವಜನಿಕ ಉಪಯುಕ್ತತೆಗಾಗಿ 36.17 ಹೆಕ್ಟೇರ್ (ಶೇ.0.76) ಹಾಗೂ ಸಾರಿಗೆ/ಸಂಪರ್ಕ ವಲಯಕ್ಕೆ 630.63 ಹೆಕ್ಟೇರ್ (ಶೇ.13.27) ಪ್ರದೇಶವನ್ನು ನಿಗದಿಪಡಿಸಲಾಗಿದೆ. ಸದರಿ ನಗರೀಕರಣ ಪ್ರದೇಶದಲ್ಲಿ 378.90 ಹೆಕ್ಟೇರ್ ಪ್ರದೇಶವು ಜಲಾವೃತ್ತವಾಗಿದ್ದು, ಸದರಿ ಪ್ರದೇಶವನ್ನು ಭೂ ವಿಶ್ಲೇಷಣೆಗೆ ಪರಿಗಣಿಸಿರುವುದಿಲ್ಲ.

7/3/18

ಮಹಾಯೋಜನೆಯನ್ನು ಅನುಷ್ಠಾನಕ್ಕೆ ತರಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದ್ದು, ಸದರಿ ಮಹಾಯೋಜನೆ (ಪರಿಷ್ಕೃತ-1)ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 13(3)ರನ್ವಯ ಅಂತಿಮ ಅನುಮೋದನೆ ನೀಡಲು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿದ ನಂತರ ಸರ್ಕಾರವು ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ; ನಅಇ 248 ಬೆಂರೂಪ್ರಾ 2016 , ಬೆಂಗಳೂರು, ದಿನಾಂಕ: 02.03.2018.**

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕೋಲಾರ ಜಿಲ್ಲೆ, ಕೆ.ಜಿ.ಎಫ್ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ರೂಪಿಸಿರುವ ಮಹಾಯೋಜನೆ (ಪರಿಷ್ಕೃತ-1) 2031ಕ್ಕೆ ಈ ಕೆಳಕಂಡ ಷರತ್ತಿಗೊಳಪಟ್ಟು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಪ್ರಕರಣ 13(3) ರನ್ವಯ ಸರ್ಕಾರದ ಅಂತಿಮ ಅನುಮೋದನೆ ನೀಡಲಾಗಿದೆ. ಮಹಾಯೋಜನೆ (ಪರಿಷ್ಕೃತ-1) 2031ಕ್ಕೆ ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

**ಷರತ್ತು:**
ಈ ಆದೇಶದ ದಿನಾಂಕದಿಂದ ಎರಡು ವರ್ಷಗಳವರೆಗೆ ಪ್ರಾಧಿಕಾರವು ಯಾವುದೇ ಭೂ ಉಪಯೋಗ ಬದಲಾವಣೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸುವಂತಿಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ನಾಗರಾಜ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

**ಇವರಿಗೆ:**
ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ ಇವರಿಗೆ ಸದರಿ ಆದೇಶವನ್ನು ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಿ, ಪ್ರಕಟಿತ 250 ಪ್ರತಿಗಳನ್ನು ನಗರಾಭಿವೃದ್ಧಿ ಇಲಾಖೆಗೆ ಕಳುಹಿಸುವಂತೆ ಕೋರಿದೆ.

**ಪ್ರತಿಯನ್ನು ಇವರಿಗೆ:**
1. ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬೆಂಗಳೂರು.
2. ಜಿಲ್ಲಾಧಿಕಾರಿಗಳು, ಕೋಲಾರ ಜಿಲ್ಲೆ, ಕೋಲಾರ.
3. ಆಯುಕ್ತರು, ನಗರಾಭಿವೃದ್ಧಿ ಪ್ರಾಧಿಕಾರ, ಕೆ.ಜಿ.ಎಫ್.
4. ಪೌರಾಯುಕ್ತರು, ನಗರಸಭೆ, ಕೆ.ಜಿ.ಎಫ್.
5. ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರು, ಕೋಲಾರ.
6. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

**ಪ್ರತಿಯನ್ನು ಮಾಹಿತಿಗಾಗಿ:**
1. ಮಾನ್ಯ ನಗರಾಭಿವೃದ್ಧಿ ಸಚಿವರ ಆಪ್ತ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ.
2. ಸರ್ಕಾರದ ಕಾರ್ಯದರ್ಶಿ (ಮುನಿಸಿಪಾಲಿಟಿ ಮತ್ತು ಅಭಿವೃದ್ಧಿ ಪ್ರಾಧಿಕಾರಗಳು) ಇವರ ಆಪ್ತ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ.